# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಪ್ರಭುಗೌಡ ಚನ್ನಪ್ಪ ದೇಸಾಯಿ ಸದಸ್ಯರು, ಜಿಲ್ಲಾ ಪಂಚಾಯತ್, ವಿಜಯಪುರ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993, ಪ್ರಕರಣ 175 ಉಪ ಪ್ರಕರಣ 1(i) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**
1. ಜಿಲ್ಲಾಧಿಕಾರಿಗಳು, ವಿಜಯಪುರ ಇವರ ಪತ್ರ ಸಂಖ್ಯೆ: ಜಿಪಂ:ಚುನಾವಣೆ:ಸಿ.ಆರ್:1656/2016-17, ದಿನಾಂಕ:06-09-2016
2. ಉಪವಿಭಾಗಾಧಿಕಾರಿ, ವಿಜಯಪುರ ಇವರ ಆದೇಶ ಸಂಖ್ಯೆ:ಚುನಾ/ಸಿ.ಆರ್-17/2016-17, ದಿನಾಂಕ:19-04-2017

*****

**ಪ್ರಸ್ತಾವನೆ:**

ಶ್ರೀ ಗುರುನಾಥ್, ಯಮನಪ್ಪ ಬಿರಾದಾರ್ ಸಾಕಿನ್ ಬಸರಕೋಡ ಇವರು ಮಾನ್ಯ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ದೂರನ್ನು ನೀಡಿರುತ್ತಾರೆ. ದೂರಿನಲ್ಲಿ ಮುದ್ದೇಬಿಹಾಳ ತಾಲ್ಲೂಕಿನ ಬಸರಕೋಡು ಕ್ಷೇತ್ರದ ಜಿಲ್ಲಾ ಪಂಚಾಯತ್ ಮತ ಕ್ಷೇತ್ರದಿಂದ ಖೊಟ್ಟಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಿ, ವಿಜೇತರಾದ ಶ್ರೀ ಪ್ರಭುಗೌಡ ಚನ್ನಪ್ಪ ದೇಸಾಯಿ ಇವರು, ಜಿಲ್ಲಾ ಪಂಚಾಯತ್ ಮತ ಕ್ಷೇತ್ರಕ್ಕೆ ಚುನಾಯಿತರಾಗಿವುದನ್ನು ಅನರ್ಹಗೊಳಿಸಲು ಕೋರಿರುತ್ತಾರೆ.

ಸದರಿ ದೂರಿನನ್ವಯ ಜಿಲ್ಲಾಧಿಕಾರಿಗಳು, ವಿಜಯಪುರ ಇವರು ಮೇಲೆ ಓದಲಾದ (3)ರ ಪತ್ರದಲ್ಲಿ ಉಪ ವಿಭಾಗಾಧಿಕಾರಿ, ವಿಜಯಪುರ, ಇವರಿಗೆ ಪತ್ರ ಬರೆದು ದೂರಿನ ಕುರಿತು ಕೂಲಂಕಷವಾಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಮೇಲೆ ಓದಲಾದ (2) ರ ಆದೇಶದಲ್ಲಿ ಸಕ್ಷಮ ಪ್ರಾಧಿಕಾರಿಯಾದ ಉಪ ವಿಭಾಗಾಧಿಕಾರಿಗಳು, ವಿಜಯಪುರ ಇವರು ದೂರಿಗೆ ಸಂಬಂಧಪಟ್ಟ ವ್ಯಕ್ತಿಗಳಿಂದ ಸಾಕ್ಷಿ ಹೇಳಿಕೆಗಳ ವಿಚಾರಣೆ ನಡೆಸಿ, ಅಗತ್ಯ ದಾಖಲೆಗಳನ್ನು ಮತ್ತು ಹೇಳಿಕೆಗಳನ್ನು ಪಡೆದುಕೊಳ್ಳಲಾಗಿದೆ ಎಂದು ತಿಳಿಸಿರುತ್ತಾರೆ ಹಾಗೂ ಈ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು/ಸಾಕ್ಷಿ/ಹೇಳಿಕೆಗಳನ್ನು ಅವಲೋಕಿಸಿದಾಗ ಪ್ರಸ್ತುತ ಮುದ್ದೇಬಿಹಾಳ ತಾಲ್ಲೂಕಿನ, ಬಸರಕೋಡು ಜಿಲ್ಲಾ ಪಂಚಾಯತ್ ಮತ ಕ್ಷೇತ್ರದಿಂದ ಚುನಾಯಿತರಾಗಿ ಆಯ್ಕೆಯಾದ ಶ್ರೀ ಪ್ರಭುಗೌಡ ಚನ್ನಪ್ಪ ದೇಸಾಯಿ, ಇವರು ಜಾತಿಯಿಂದ "ಹಿಂದು ರೆಡ್ಡಿ" ಪ್ರವರ್ಗ-ಬಿ (ಚುನಾವಣಾ ಉದ್ದೇಶಕ್ಕಾಗಿ) ಜಾತಿಗೆ ಸೇರುತ್ತಿದ್ದರೂ, ಚುನಾವಣಾ ಸುತ್ತೋಲೆ ಮತ್ತು ನಿರ್ದೇಶನಗಳನ್ವಯ ಸದರಿಯವರು ಹೊಂದಿರುವ ಆಸ್ತಿ ಮತ್ತು ಆದಾಯಗಳ ಬಗ್ಗೆ ಸುಳ್ಳು ಮಾಹಿತಿ ಸಲ್ಲಿಸಿ, ಹಿಂದುಳಿದ ಪ್ರವರ್ಗ "ಬ ವರ್ಗ"ಕ್ಕೆ ಸೇರಿದವರು ಎಂದು ಜಾತಿ ಪ್ರಮಾಣ ಪತ್ರ ಪಡೆದುಕೊಂಡು ಆಯ್ಕೆಯಾಗಿರುವುದು ಸ್ಪಷ್ಟವಾಗಿರುವುದರಿಂದ ಹಿಂದುಳಿದ ವರ್ಗ "ಬ ವರ್ಗ"ಕ್ಕೆ ಸೇರಿದವರು ಎಂದು ಚುನಾವಣಾ ಉದ್ದೇಶಕ್ಕಾಗಿ ಪಡೆದುಕೊಂಡಿರುವ ಜಾತಿ ಪ್ರಮಾಣ ಪತ್ರ ಸಂಖ್ಯೆ: ಗ್ರಾಪಂ/ಚುನಾವಣೆ:ಸಿಆರ್:23:2015-16 ದಿನಾಂಕ:05-02-2016 ರನ್ನು ರದ್ದುಪಡಿಸಿ, ಆದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು, ವಿಜಯಪುರ ಇವರು ಈ ಪ್ರಕರಣದ ಕುರಿತು ಉಪ ವಿಭಾಗಾಧಿಕಾರಿ, ವಿಜಯಪುರ ಇವರ ವರದಿಯನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆದುದರಿಂದ, ಶ್ರೀ ಪ್ರಭುಗೌಡ ಚನ್ನಪ್ಪ ದೇಸಾಯಿ, ಜಿಲ್ಲಾ ಪಂಚಾಯತ್ ಸದಸ್ಯರು, ವಿಜಯಪುರ ಇವರು ಸುಳ್ಳು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಿ, ಆಯ್ಕೆಯಾಗಿರುವುದು, ದುರ್ನಡತೆ ಅಥವಾ ತಲೆತಗ್ಗಿಸುವಂಥ ನಡತೆಯ ತಪ್ಪಿತಸ್ಥನಾಗಿದ್ದಾನೆ ಎಂದು ಪರಿಗಣಿಸಿ, ಸದರಿಯವರ ವಿರುದ್ಧ ಸರ್ಕಾರವು ಕರ್ನಾಟಕ ಗ್ರಾಮ

ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 175 ಉಪ ಪ್ರಕರಣ 1(i) ರನ್ವಯ ವಿಜಯಪುರ ಜಿಲ್ಲಾ ಪಂಚಾಯತ್ ಸದಸ್ಯತ್ವದಿಂದ ತೆಗೆದು ಹಾಕಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 120 ಜಿಪಸ 2017, ಬೆಂಗಳೂರು, ದಿನಾಂಕ: 03-11-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 175 ಉಪ-ಪ್ರಕರಣ(1)(i) ರನ್ವಯ ಶ್ರೀ ಪ್ರಭುಗೌಡ ಚನ್ನಪ್ಪ ದೇಸಾಯಿ, ಜಿಲ್ಲಾ ಪಂಚಾಯತ್ ಸದಸ್ಯರು, ವಿಜಯಪುರ ಇವರು ಸುಳ್ಳು ಜಾತಿ ಪ್ರಮಾಣ ಪತ್ರವನ್ನು ಪಡೆದು ಆಯ್ಕೆಯಾಗಿರುವುದು ದುರ್ನಡತೆ ಎಂದು ಪರಿಗಣಿಸಿ, ಇವರನ್ನು ವಿಜಯಪುರ ಜಿಲ್ಲಾ ಪಂಚಾಯತಿಯ ಸದಸ್ಯತ್ವದಿಂದ ತೆಗೆದುಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ನಿಯಮಾನುಸಾರ ಮುಂದಿನ ಸೂಕ್ತ ಕ್ರಮಕ್ಕಾಗಿ
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಜಿಲ್ಲೆ.
3. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಕಟ್ಟಡ (ಹಿಂಭಾಗ), ನಂ.8. 1ನೇ ಮಹಡಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-560052 ಮುಂದಿನ ಸೂಕ್ತ ಕ್ರಮಕ್ಕಾಗಿ
4. ಶ್ರೀ. ಪ್ರಭು ಗೌಡ ಚನ್ನಪ್ಪ ದೇಸಾಯಿ, ಸಾ|| ಮಡಿಕೇಶ್ವರ, ತಾ|| ಮುದ್ದೇಬಿಹಾಳ, ಜಿಲ್ಲೆ|| ವಿಜಯಪುರ.
5. ವ್ಯವಸ್ಥಾಪಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ-ಇವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.